# Bangalore
# Regional News
# 08.07.2024 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಡೆಂಘೀ ಪ್ರಕರಣಗಳ ನಿಯಂತ್ರಣಕ್ಕೆ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ಅನರ್ಹ ಬಿಪಿಎಲ್ ಕಾರ್ಡ್ ರದ್ದುಪಡಿಸಿ ಅರ್ಹರಿಗೆ ನೀಡುವಂತೆ ರಾಜ್ಯ ಸರ್ಕಾರ ಆದೇಶ

೩. ರೈತರಿಗೆ ನೀಡಲು ಸರ್ಕಾರದ ಬಳಿ ಪ್ರೋತ್ಸಾಹ ಧನವಿಲ್ಲ- ಆರ್.ಅಶೋಕ್ ಆರೋಪ

೪. ಮೂಡ ಹಗರಣದ ಬಗ್ಗೆ ಸಿಬಿಐ, ಎಸ್ಐಟಿ ತನಿಖೆ ಅಗತ್ಯವಿಲ್ಲ- ಗೃಹ ಸಚಿವ ಡಾ.ಜಿ.ಪರಮೇಶ್ವರ್

**<><*<><>*><>**

ಜಿಲ್ಲಾಧಿಕಾರಿಗಳಿಗೆ ಮಹಾರಾಜರು ಎನ್ನುವ ಮನೋಭಾವ ಇದ್ದರೆ ಜನಸೇವೆ ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ. ವಿಧಾನಸೌಧದಲ್ಲಿ ನಡೆದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಕಾರ್ಯನಿರ್ವಹಣಾಧಿಕಾರಿಗಳ ಮತ್ತು ಉಸ್ತುವಾರಿ ಕಾರ್ಯದರ್ಶಿಗಳ ಸಭೆಯಲ್ಲಿ ಮಾತನಾಡಿದ ಅವರು, ತಕ್ಷಣವೇ ಡೆಂಘಿ ಪ್ರಕರಣಗಳನ್ನು ನಿಯಂತ್ರಣಕ್ಕೆ ತನ್ನಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಉದಾಸೀನ, ನಿರ್ಲಕ್ಷ್ಯ, ಕರ್ತವ್ಯಲೋಪಕ್ಕೆ ಕೆಳ ಹಂತದ ಅಧಿಕಾರಿಗಳ ವಿರುದ್ಧ ಮಾತ್ರವಲ್ಲ, ಹಿರಿಯ ಅಧಿಕಾರಿಗಳನ್ನೂ ಹೊಣೆ ಮಾಡಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಅಭಿವೃದ್ಧಿ ಮತ್ತು ಕಾನೂನು ಸುವ್ಯವಸ್ಥೆ ಪರಸ್ಪರ ಪೂರಕವಾಗಿದೆ ಎಂದು ಹೇಳಿದ ಅವರು, ಕರ್ನಾಟಕ ಉತ್ತಮ ಆಡಳಿತ ನೀಡುವಲ್ಲಿ ಮಾದರಿ ರಾಜ್ಯವೆಂಬುದನ್ನು ಮರೆಯಬಾರದು ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಶೇಕಡ ೮೦ ರಷ್ಟು ಬಿಪಿಎಲ್ ಕಾರ್ಡು ಹೊಂದಿದ್ದು ತಮಿಳುನಾಡಿನಲ್ಲಿ ಶೇಕಡ ೪೦ ರಷ್ಟಿದೆ. ನೀತಿ ಆಯೋಗದ ಪ್ರಕಾರ ರಾಜ್ಯದಲ್ಲಿ ಪ್ರಸ್ತುತ ಬಡತನ ರೇಖೆಗಿಂತ ಕೆಳಗಿರುವವರ ಪ್ರಮಾಣ ಶೇ.೫.೬೭ ಇರಬೇಕು. ಆದರೆ ರಾಜ್ಯದಲ್ಲಿ ೧ ಕೋಟಿ ೨೭ ಲಕ್ಷ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಅನರ್ಹ ಬಿ.ಪಿ.ಎಲ್. ಕಾರ್ಡುಗಳನ್ನು ರದ್ದು ಪಡಿಸಿ, ಅರ್ಹರಿಗೆ ಬಿಪಿಎಲ್ ಕಾರ್ಡು ಒದಗಿಸಬೇಕು ಎಂದು ಸೂಚಿಸಿದ್ದಾರೆ. ಸಭೆಯಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ, ಕಲ್ಬುರ್ಗಿ ಮಹಿಳಾ ಹಾಸ್ಟೆಲ್ ಗೆ ಭೇಟಿ ನೀಡಿ ಹಾಸ್ಟೆಲ್ ಟ್ಯಾಂಕ್ ಮೂಲಕ ಕಲುಷಿತ ನೀರಿನ ಸರಬರಾಜು ಆಗುತ್ತಿರುವ ಬಗ್ಗೆ ಬರೆದಿರುವ ಪತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಸಮಸ್ಯೆಯನ್ನು ಬಗೆಹರಿಸಿ ಈಗಾಗಲೇ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ಎಂದು ಉತ್ತರಿಸಿದರು. ಗ್ಯಾರಂಟಿ ಯೋಜನೆಗಳ ಕುರಿತು ಜಾಗೃತಿ ಮೂಡಿಸಲು ಹಾಗೂ ಫಲಾನುಭವಿಗಳಿಂದ ಪ್ರತಿಕ್ರಿಯೆ ಪಡೆಯಲು ಸಮೀಕ್ಷೆ ಕಾರ್ಯವನ್ನು ಚುರುಕುಗೊಳಿಸಬೇಕು ಎಂದು ಸೂಚಿಸಿದರು. ಇದೇ ವೇಳೆ ಗ್ರಾಮೀಣ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರು ಒದಗಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

<><*<><>*><>

ರಾಜ್ಯದಲ್ಲಿ ಡೆಂಘೀ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಸರ್ಕಾರ ಜಾಗೃತಿ ಮೂಡಿಸುವಲ್ಲಿ ನಿರತವಾಗಿದೆ. ಡೆಂಘೀ ಹತೋಟಿಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಆರೋಗ್ಯ ಇಲಾಖೆ ಅಧಿಕಾರಿಗಳ ಸಭೆ ನಡೆಸಿದ ಅವರು, ಸ್ಥಳಿಯ ಸಂಸ್ಥೆಗಳು ಮತ್ತು  ಸ್ವ ಸಹಾಯ ಸಂಘಗಳ ನೆರವಿನಿಂದ ಜಾಗೃತಿ, ಮುನ್ನೆಚ್ಚರಿಕೆ ಮೂಲಕ ಜಿಲ್ಲೆಯಲ್ಲಿ ಡೆಂಘೀ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ೮೩೧ ಜನರಿಗೆ ಡೆಂಘಿ ಪರೀಕ್ಷೆ ಮಾಡಲಾಗಿದ್ದು, ೭ ಜನರಲ್ಲಿ ಡೆಂಘೀ ಪತ್ತೆಯಾಗಿದೆ. ಐವರು ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ ಎಂದು ಯಾದಗಿರಿ ಪ್ರಭಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮೊಹಮ್ಮದ್ ಸಾಜಿದ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಡಾ.ಮೊಹಮ್ಮದ್ ಸಾಜಿದ್

ಕೋಲಾರ ಜಿಲ್ಲೆಯ ಮುಳಬಾಗಿಲು ನಗರದ ೩೧ ವಾರ್ಡ್‌ಗಳಲ್ಲಿ ಡೆಂಘಿ ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಂಡಿರುವುದಾಗಿ ನಗರಸಭೆ ಪೌರಾಯುಕ್ತ ವಿ.ಶ್ರೀಧರ್ ತಿಳಿಸಿದ್ದಾರೆ. ನಗರವನ್ನು ಡೆಂಘೀ ಮುಕ್ತವಾಗಿ ರೂಪಿಸಲು ಆರೋಗ್ಯ ಇಲಾಖೆ ಮತ್ತು ನಗರಸಭೆ ಸಿಬ್ಬಂದಿ ಜಂಟಿಯಾಗಿ ಫಾಗಿಂಗ್ ಕಾರ್ಯ ಮಾಡಲಾಗುತ್ತಿದೆ. ಜನರು ಡೆಂಘಿ ರೋಗ ಲಕ್ಷಣ ಕಂಡು ಬಂದ ಕೂಡಲೇ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯುವಂತೆ ಸೂಚಿಸಿದ್ದಾರೆ.

<><*<><>*><>

ಹಾವೇರಿ ತಾಲ್ಲೂಕು ಬೆಂಚಿಹಳ್ಳಿ ಗ್ರಾಮದ ೧೨ ವರ್ಷದ ಬಾಲಕ ಇಲಿ ಜ್ವರದಿಂದ ಬಳಲುತ್ತಿದ್ದು, ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಪಿ.ಆರ್.ಹಾವನೂರು ತಿಳಿಸಿದ್ದಾರೆ. ಇಲಿಯ ಮಲ ಹಾಗೂ ಮೂತ್ರದಲ್ಲಿರುವ ಬ್ಯಾಕ್ಟೀರಿಯಾ, ಮನುಷ್ಯನ ದೇಹ ಪ್ರವೇಶಿಸಿದಾಗ ಇಲಿ ಜ್ವರ ಬರುತ್ತದೆ. ಈ ಜ್ವರಕ್ಕೆ ಚಿಕಿತ್ಸೆ ಲಭ್ಯವಿದ್ದು,  ಬಾಲಕನ ಆರೋಗ್ಯವೂ ಸುಧಾರಿಸುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.  ಬಾಲಕ ವಾಸವಿದ್ದ ಗ್ರಾಮದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ ಜನರಲ್ಲಿ ಜಾಗೃತಿ ಮೂಡಿಸುವಲ್ಲಿ ನಿರತರಾಗಿದ್ದಾರೆ.

<><*<><>*><>

ರಾಜ್ಯ ಕಾಂಗ್ರೆಸ್ ಸರ್ಕಾರದ ಏಕೈಕ ಸಾಧನೆ ಅಂದರೆ ಆರ್ಥಿಕ ಅಧೋಗತಿ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ ಸಾಮಾಜಿಕ ಜಾಲ ತಾಣದಲ್ಲಿ ಆರೋಪಿಸಿದ್ದಾರೆ. ಗುತ್ತಿಗೆದಾರರ ಬಾಕಿ ಹಣ ಪಾವತಿಗೆ ದುಡ್ಡಿಲ್ಲ, ನೌಕರರ ವೇತನ ಹೆಚ್ಚಳವಿಲ್ಲ, ಗೃಹಲಕ್ಷ್ಮಿ ಹಣ ಬರುತ್ತಿಲ್ಲ, ರೈತರಿಗೆ ಪ್ರೋತ್ಸಾಹ ಧನವಿಲ್ಲ ಎಂದು ವ್ಯಂಗ್ಯವಾಡಿದ್ದಾರೆ. ರಾಜ್ಯದಲ್ಲಿರುವುದು ರೈತ ವಿರೋಧಿ ಸರ್ಕಾರ ಎಂದು ಟೀಕಿಸಿದ್ದಾರೆ.

<><*<><>*><>

ಮೂಡಾ ಹಗರಣದ ತನಿಖೆಯನ್ನು ಸಿಬಿಐಗೆ ನೀಡುವ ಪ್ರಸ್ತಾಪವನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಳ್ಳಿಹಾಕಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಟಿ ತನಿಖೆಯ ಅಗತ್ಯವೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಹಾಗೂ ಬಿಜೆಪಿ ಮಾಡುತ್ತಿರುವ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಪ್ರಕರಣದ ಬಗ್ಗೆ ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಸ್ಪಷ್ಟನೆ ನೀಡಿದ್ದು, ಎಲ್ಲವೂ ತೆರದ ಪುಸ್ತಕ ಎಂದು ಹೇಳಿದ್ದಾರೆ. ಇದೇ ವೇಳೆ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಆರೋಪಿಗಳನ್ನು ಬಂಧಿಸಿ ಜೈಲಿನಲ್ಲಿ ಇರಿಸಲಾಗಿದ್ದು, ತನಿಖಾಧಿಕಾರಿಗಳಿಂದ ಸಾಕ್ಷ್ಯ ಪುರಾವೆ ಸಂಗ್ರಹಿಸುವ ಕೆಲಸ ನಡೆಯುತ್ತಿದೆ. ಎಲ್ಲಾ ಪಕ್ರಿಯೆ ಮುಗಿದ ಬಳಿಕ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಮಂಡ್ಯದ ಮೈಶುಗರ್ ಸಕ್ಕರೆ ಕಾರ್ಖಾನೆಯ ವಿದ್ಯುತ್ ಬಿಲ್ ಬಾಕಿಯನ್ನು ಮನ್ನಾ ಮಾಡುವ ಬಗ್ಗೆ ಪರಿಶೀಲಿಸಿ, ಕಡತ ಮಂಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಣಕಾಸು ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗೆ ಆದೇಶಿಸಿದ್ದಾರೆ. ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರು ಮೈಶುಗರ್ ಸಕ್ಕರೆ ಕಾರ್ಖಾನೆಯ ಬಾಕಿ ವಿದ್ಯುತ್ ಬಿಲ್ ಅನ್ನು ಮನ್ನಾ ಮಾಡುವಂತೆ ಮಾಡಿರುವ ಮನವಿಗೆ ಮುಖ್ಯಮಂತಿಯವರು ಸ್ಪಂದಿಸಿದ್ದು, ಪ್ರಸ್ತಾವನೆಯನ್ನು ಸಚಿವ ಸಂಪುಟದ ಮುಂದೆ ತರುವಂತೆ ಸೂಚಿಸಿದ್ದಾರೆ. ಮಂಡ್ಯ ಮೈಶುಗರ್ ಕಾರ್ಖಾನೆ ಕಳೆದ ೨೫ ವರ್ಷಗಳಿಂದ ವಿದ್ಯುತ್ ಬಿಲ್ ಪಾವತಿಸಿಲ್ಲ. ಹೀಗಾಗಿ ೫೨ ಕೋಟಿ ೨೫ ಲಕ್ಷ ರೂಪಾಯಿ ಬಾಕಿ ಪಾವತಿಸುವಂತೆ ವಿದ್ಯುತ್ ಸರಬರಾಜು ಕಂಪನಿಯು ಕಾರ್ಖಾನೆಗೆ ನೋಟಿಸ್ ನೀಡಿತ್ತು. ಈ ನಿಟ್ಟಿನಲ್ಲಿ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದರು.

<><*<><>*><>

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ೨೦೧೯ ರಿಂದ ೨೦೨೩ರವರೆಗೆ ಟಿ ಎಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚಿಸಲಾಗಿದ್ದು ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ. ಹೈಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಪಿ.ಎನ್.ದೇಸಾಯಿ ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಹಿರಿಯ ಪತ್ರಕರ್ತರಾದ ಡಾ.ಈಶ್ವರ ದೈತೋಟ, ಶಾಂತಲಾ ಧರ್ಮರಾಜ್ ಹಾಗೂ ಎಂ.ಎಸ್.ಮಣಿ ಸದಸ್ಯರಾಗಿದ್ದಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಪ್ರಶಸ್ತಿಯ ಮೊತ್ತ ೨ ಲಕ್ಷ ರೂಪಾಯಿಯಾಗಿದ್ದು, ಕನ್ನಡ ಪತ್ರಿಕೋದ್ಯಮ, ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮದಲ್ಲಿ ಕನಿಷ್ಠ ೩೦ ವರ್ಷಗಳ ಸೇವೆ ಸಲ್ಲಿಸಿರಬೇಕು. ಜೊತೆಗೆ ಕನ್ನಡ ಕ್ಷೇತ್ರಕ್ಕೆ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರುವವರನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು ಎಂದು ವಾರ್ತಾ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಉತ್ತರಕನ್ನಡ ಜಿಲ್ಲೆಯಲ್ಲಿ ಮಳೆಯ ಪ್ರಮಾಣ ತಗ್ಗಿದ್ದು, ಕಾಳಜಿ ಕೇಂದ್ರದಲ್ಲಿ ಆಶ್ರಯ ಪಡೆದಿದ್ದ ಬಹುತೇಕ ಮಂದಿ ತಮ್ಮ ನಿವಾಸಗಳಿಗೆ ತೆರಳಿದ್ದಾರೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಪ್ರಿಯಾ ಕೆ. ತಿಳಿಸಿದ್ದಾರೆ. ಪ್ರಸ್ತುತ ೮ ಕಾಳಜಿ ಕೇಂದ್ರಗಳಲ್ಲಿ ೨೬ ಮಂದಿ ಆಶ್ರಯ ಪಡೆದಿದ್ದು, ಅವರಿಗೆ ಎಲ್ಲಾ

ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಹೇಳಿದ್ದಾರೆ.  ಮುನ್ನೆಚ್ಚರಿಕೆ ಕ್ರಮವಾಗಿ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ಸೇರಿದಂತೆ ಒಟ್ಟು ಐದು ಕರಾವಳಿ ತಾಲ್ಲೂಕುಗಳ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಕಾಳಿ ನದಿ ವ್ಯಾಪ್ತಿಯ ಕದ್ರಾ ಅಣೆಕಟ್ಟೆಯ ಜಲಾನಯನ ಪ್ರದೇಶದಲ್ಲಿ ಮಳೆ ಕಡಿಮೆಯಾಗಿದ್ದು, ಅಣೆಕಟ್ಟಿನಲ್ಲಿ ನೀರಿನ ಪ್ರಮಾಣವು ಜಿಲ್ಲಾಡಳಿತ ನಿಗದಿಪಡಿಸಿದ ಗರಿಷ್ಠ ಮಟ್ಟಕ್ಕಿಂತ ಕಡಿಮೆಯಿದೆ ಎಂದು ಮಾಹಿತಿ ನೀಡಿದ್ದಾರೆ. ಜಿಲ್ಲೆಯಲ್ಲಿ ಮಳೆಯಿಂದ ಯಾವುದೇ ಜೀವ ಹಾನಿಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸುವಂತೆ ಎಲ್ಲಾ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

<u>ಇನ್ನು ಹವಾವರ್ತಮಾನ...</u>

ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿಯಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಪ್ರವಾಹ ಪರಿಸ್ಥಿತಿ ಎದುರಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಚಿಕ್ಕಮಗಳೂರು, ಶಿವಮೊಗ್ಗ ಜಲ್ಲೆಯ ಹಲವೆಡೆ ಗಾಳಿಯೊಂದಿಗೆ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬೆಂಗಳೂರು ನಗರ ಮತ್ತು ಸುತ್ತಮುತ್ತ ಮೋಡಕವಿದ ಆಕಾಶವಿದ್ದು, ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ.

**<><*<><>*><>**

ಮಂಡ್ಯ ಜಿಲ್ಲೆಯಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಅನ್ನು ಇದೇ ೧೩ರಂದು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶ ಆನಂದ್ ತಿಳಿಸಿದ್ದಾರೆ.  ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕ್ ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನಿಟ್ಟಿನಲ್ಲಿ ಪೂರ್ವಭಾವಿ ಬೈಠಕ್‌ಗಳನ್ನು ನಡೆಸಲಾಗಿದೆ ಎಂದು ಹೇಳಿದರು.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**